ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ 7/ಇಸಿಎಸ್(1)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-1
ದಿನಾಂಕ:16-05-2018

## ಸುತ್ತೋಲೆ

ವಿಷಯ: 2018 ಮೇ/ಜೂನ್ ಡಿಪ್ಲೊಮೋ ಸೆಮಿಸ್ಟರ್ ಥಿಯರಿ ಪರೀಕ್ಷೆ ಕಾರ್ಯಗಳಿಗೆ ಉಪನ್ಯಾಸಕರುಗಳನ್ನು ನಿಯೋಜಿಸಿರುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ:ಇಡಿ 57 ಟಿಪಿಇ 2013 ದಿನಾಂಕ;17-4-2015

**************

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2018 ಮೇ/ಜೂನ್ ಡಿಪ್ಲೊಮೋ ಸೆಮಿಸ್ಟರ್ ಥಿಯರಿ ಪರೀಕ್ಷೆ ಕಾರ್ಯಗಳಿಗೆ ಮುಖ್ಯ ಅಧೀಕ್ಷಕರು/ ಉಪ ಮುಖ್ಯ ಅಧೀಕ್ಷಕರು/ ಮುಖ್ಯ ವೀಕ್ಷಕರು/ಆಂತರಿಕ ಅಂಕಗಳ ಪರಿವೀಕ್ಷಕರು ಗಳಾಗಿ ಉಪನ್ಯಾಸಕರುಗಳನ್ನು ವಿವಿಧ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಲಾಗಿದೆ. ಪ್ರಯುಕ್ತ ಸಂಬಂಧಿಸಿದ ಸಂಸ್ಥೆಯ ಪ್ರಿನ್ಸಿಪಾಲರುಗಳು ನಿಯೋಜಿತ ಉಪನ್ಯಾಸಕರುಗಳನ್ನು (ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿರುವಂತೆ) ಸಂಸ್ಥೆಯಿಂದ ಕಡ್ಡಾಯವಾಗಿ ಬಿಡುಗಡೆಗೊಳಿಸಲು ತಿಳಿಸಲಾಗಿದೆ. ಹಾಗೂ ಸಂಸ್ಥೆಗಳಿಂದ ಬಿಡುಗಡೆಗೊಂಡ ಸದರಿ ಉಪನ್ಯಾಸಕರುಗಳು ತಮಗೆ ನಿಗದಿಪಡಿಸಿದ ಪರೀಕ್ಷಾ ಕೇಂದ್ರಗಳಲ್ಲಿ ತಪ್ಪದೇ 2 ದಿನ ಮುಂಚಿತವಾಗಿ ಕಾರ್ಯವರದಿ ಮಾಡಿಕೊಂಡು ಕಾಲ ಕಾಲಕ್ಕೆ ಕಾರ್ಯದರ್ಶಿಯವರು ನೀಡುವ ಕಾರ್ಯ ಸೂಚನೆ/ ಆದೇಶಗಳನ್ವಯ ಪರೀಕ್ಷಾ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಲು ತಿಳಿಸಲಾಗಿದೆ. ತಪ್ಪಿದ್ದಲ್ಲಿ ಸಂಬಂಧಿಸಿದ ಪ್ರಿನ್ಸಿಪಾಲರು ಹಾಗೂ ಉಪನ್ಯಾಸಕರುಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,
ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ

ಪ್ರತಿ:

1. ರಾಜ್ಯದ ಎಲ್ಲಾ ಪಾಲಿಟೆಕ್ನಿಕ್ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು/ಪ್ರಿನ್ಸಿಪಾಲರುಗಳು – ಮಾಹಿತಿಗಾಗಿ
2. ಇ-ಆಡಳಿತ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
3. ಗಣಕ ಕೇಂದ್ರ- ವೆಬ್ ಪೋರ್ಟಲ್‌ನಲ್ಲಿ ಪ್ರಕಟಿಸಲು